3/5/2021 pressnote fda keyanswer 28-2-2021 exam.jpg (1700×2338)

**ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು-01**

**ಸಂಖ್ಯೆ:ಇ(2)4156/2020-21/ಪಿಎಸ್‌ಸಿ** **ದಿನಾಂಕ:04-03-2021**

**ಪ್ರಕಟಣೆ**

ಆಯೋಗವು ದಿನಾಂಕ:28-02-2021 ರಂದು ನಡೆದ ವಿವಿಧ ಇಲಾಖೆಗಳಲ್ಲಿನ ಸಹಾಯಕರು/ಪ್ರಥಮ ದರ್ಜೆ ಸಹಾಯಕರು ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯ ಸಾಮಾನ್ಯ ಜ್ಞಾನ(ವಿಷಯ ಸಂಕೇತ-385), ಸಾಮಾನ್ಯ ಕನ್ನಡ (ವಿಷಯ ಸಂಕೇತ-386), ಸಾಮಾನ್ಯ ಇಂಗ್ಲೀಷ್ (ವಿಷಯ ಸಂಕೇತ-387)ರ ಕೀ-ಉತ್ತರಗಳನ್ನು ಆಯೋಗದ ಅಂತರ್ಜಾಲ http://kpsc.kar.nic.in ನಲ್ಲಿ ಪ್ರಕಟಿಸಿದ್ದು, ಸದರಿ ಕೀ-ಉತ್ತರಗಳಿಗೆ ಅಭ್ಯರ್ಥಿಗಳಿಂದ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ಕೆಳಕಂಡ ಸೂಚನೆಗಳಂತೆ ಆಕ್ಷೇಪಣೆಗಳನ್ನು ಸಲ್ಲಿಸಬಹುದೆಂದು ಎಂದು ಈ ಮೂಲಕ ತಿಳಿಸಿದೆ.

- **ಕೀ ಉತ್ತರಗಳಿಗೆ ಆಕ್ಷೇಪಣೆಗಳನ್ನು ದಿನಾಂಕ:10-03-2021ರಂದು ಸಂಜೆ 5:30 ರೊಳಗಾಗಿ ಪರೀಕ್ಷಾ ನಿಯಂತ್ರಕರು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು-560001 ಈ ವಿಳಾಸಕ್ಕೆ ಮಾತ್ರ ತಲುಪುವಂತೆ ಕಳುಹಿಸಿಕೊಡಬೇಕು.** ಆಕ್ಷೇಪಣೆಗಳನ್ನು ಸ್ವೀಕರಿಸುವ ಕೊನೆಯ ದಿನಾಂಕ:10-03-2021ರ ಸಂಜೆ 5:30 ಆಗಿದ್ದು, ಈ ಅವಧಿಯ ನಂತರ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ತಿರಸ್ಕರಿಸಲಾಗುವುದು." ಅಭ್ಯರ್ಥಿಗಳ ಆಕ್ಷೇಪಣೆಗಳ ಅಂಚೆಯ ಮೂಲಕ ಆಯೋಗಕ್ಕೆ ತಲುಪಲು ವಿಳಂಬವಾದಲ್ಲಿ ಕೆ.ಪಿ.ಎಸ್.ಸಿ.ಯು ಜವಾಬ್ದಾರಿಯಾಗಿರುವುದಿಲ್ಲ.
- ಆಕ್ಷೇಪಣೆಗಳ ವಿವರಗಳನ್ನು ಕಡ್ಡಾಯವಾಗಿ ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುವ ನಮೂನೆಯಲ್ಲಿಯೇ (ಕನ್ನಡ ಅಥವಾ ಇಂಗ್ಲೀಷ್) ಸಲ್ಲಿಸಬೇಕು ಹಾಗು ಇದರೊಂದಿಗೆ ಪ್ರತಿ ಪ್ರಶ್ನೆಗೆ ರೂ.50/- ರಂತೆ ಶುಲ್ಕವನ್ನು (ಐ.ಪಿ.ಓ ಅಥವಾ ಡಿ.ಡಿ ಮೂಲಕ) ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು, ಇವರ ಹೆಸರಿಗೆ ಸಂದಾಯ ಮಾಡಬೇಕು.
- ಶುಲ್ಕ ಸಂದಾಯ ಮಾಡದ ಆಕ್ಷೇಪಣಾ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಪ್ರತಿ ಪ್ರಶ್ನೆಯ ಕೀ ಉತ್ತರಕ್ಕೆ ಸಲ್ಲಿಸುವ ಆಕ್ಷೇಪಣೆಗಳಿಗೆ ಪೂರಕವಾಗಿ ದ್ವಿಪ್ರತಿಯಲ್ಲಿ ಸಲ್ಲಿಸುವ ದಾಖಲೆಗಳೀಗೆ ಸಂಬಂಧಿಸಿದಂತೆ ಲೇಖಕರ ಹೆಸರು, ಪ್ರಕಾಶನದ ಪ್ರತಿ ಇತ್ಯಾದಿ ವಿವರಗಳನ್ನು ಆಕ್ಷೇಪಣೆಗಳೊಂದಿಗೆ ನಮೂನೆಯಲ್ಲಿ ನಮೂದಿಸತಕ್ಕದ್ದು.
- ದಾಖಲೆಗಳನ್ನು ದ್ವಿಪ್ರತಿಯಲ್ಲಿ ಹಾಗೂ ನಿಗದಿತ ನಮೂನೆಯಲ್ಲಿ ಸಲ್ಲಿಸುವ ಆಕ್ಷೇಪಣೆಗಳನ್ನು ತಿರಸ್ಕರಿಸಲಾಗುವುದು.
- ದಾಖಲೆಗಳ ಪ್ರತಿ ಪುಟದ ಮೇಲೆ ಪ್ರಶ್ನೆ ಸಂಖ್ಯೆ ಮತ್ತು ನೋಂದಣಿ ಸಂಖ್ಯೆಯನ್ನು ಕಡ್ಡಾಯವಾಗಿ ಬರೆಯತಕ್ಕದ್ದು,
- ಆಕ್ಷೇಪಣೆಯೊಂದಿಗೆ ಅಭ್ಯರ್ಥಿಯು ದೃಢೀಕರಿಸಿದ ಪ್ರವೇಶ ಪತ್ರದ ಪ್ರತಿಯನ್ನು ಪರಿಶೀಲನೆಗಾಗಿ ಲಗತ್ತಿಸಬೇಕು.

(ಆರ್. ಎಸ್. ವೆಂಕಟಯ್ಯ)
ಸಹಾಯಕ ಕಾರ್ಯದರ್ಶಿ,
ಕರ್ನಾಟಕ ಲೋಕಸೇವಾ ಆಯೋಗ.

kpsc.kar.nic.in/pressnote fda keyanswer 28-2-2021 exam.jpg 1/1